**ಕೊಡಗು ಮತ್ತು ಮೈಸೂರು ಜಿಲ್ಲೆಗೆ ಸಂಪರ್ಕ ಕಲ್ಪಿಸುವ ಸೇತುವೆ**

10-ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಕೊಡಗು ಹಾಗೂ ಮೈಸೂರು ಜಿಲ್ಲೆಗೆ ಸಂಪರ್ಕ ಕಲ್ಪಿಸಲು ಸುಮಾರು 150 ವರ್ಷಗಳ ಹಿಂದೆ ಕಾವೇರಿ ನದಿಗೆ ಕುಶಾಲನಗರದಲ್ಲಿ ನಿರ್ಮಿಸಲಾಗಿರುವ ಸೇತುವೆಯು ಪೂರ್ಣ ಶಿಥಿಲಗೊಂಡು ಅಪಾಯದ ಹಂತದಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

*(ಬೆಂಗಳೂರು - ಮಂಗಳೂರು ರಾಜ್ಯ ಹೆದ್ದಾರಿಯನ್ನು ಕಲ್ಪಿಸುವ ಸೇತುವೆ)*

ಆ) *ಹಾಗಿದ್ದಲ್ಲಿ ಸೇತುವೆಯನ್ನು ನೂತನವಾಗಿ ನಿರ್ಮಿಸಲು ಸರ್ಕಾರದವರು ಕ್ರಮ ಕೈಗೊಳ್ಳುವುದೇ?*

ಶ್ರೀ ಕೆ.ಹೆಚ್.ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಶಿಥಿಲಗೊಂಡು ಅಪಾಯ ಹಂತದಲ್ಲಿರುವುದಿಲ್ಲ.

ಆ) ಪರಿಶೀಲಿಸಲಾಗುವುದು.

**ಸೋಮವಾರಪೇಟೆ ಕೆರೆಗಳ ಬಗ್ಗೆ**

16 - ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) :ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳಿವೆ? ಈ ಕೆರೆಗಳಲ್ಲಿ ಎಷ್ಟು ಕೆರೆಗಳು ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುತ್ತವೆ?*

ಆ) *ಈ ಕೆರೆಗಳಲ್ಲಿ ಎಷ್ಟು ಎಷ್ಟು ಕೆರೆಗಳಲ್ಲಿ ಹೂಳನ್ನು ತೆಗೆಯಲಾಗಿರುತ್ತದೆ?*

ಇ) *ಹೂಳೆತ್ತಲು ಬಾಕಿ ಇರುವ ಕೆರೆಗಳೆಷ್ಟು?*

ಈ) *ಇದಕ್ಕಾಗಿ ಎಷ್ಟು ಹಣವನ್ನು ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ?*

ಶ್ರೀ ಎಂ.ಪಿ. ಕೇಶವಮೂರ್ತಿ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಸೋಮವಾರ ಪೇಟೆ ತಾಲ್ಲೂಕಿನ ಒಟ್ಟು ಕೆರೆಗಳ ಸಂಖ್ಯೆ : 357 ಇವುಗಳಲ್ಲಿ ಒಟ್ಟು 24 ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುತ್ತದೆ.

ಆ) ಸಣ್ಣ ನೀರಾವರಿ ವ್ಯಾಪ್ತಿಯ 3 ಕೆರೆಗಳಲ್ಲಿ ಮತ್ತು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯ 25 ಕೆರೆಗಳಲ್ಲಿ ಹೂಳನ್ನು ತೆಗೆಯಲಾಗಿರುತ್ತದೆ.

ಇ) ಸಣ್ಣ ನೀರಾವರಿ ವ್ಯಾಪ್ತಿಯ 21 ಕೆರೆಗಳು ಮತ್ತು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯ 308 ಕೆರೆಗಳಲ್ಲಿ ಹೂಳು ತೆಗೆಯಬೇಕಾಗಿರುತ್ತದೆ.

ಈ) ಸಣ್ಣ ನೀರಾವರಿ ಇಲಾಖೆಗಳಲ್ಲಿ 0.90 ಲಕ್ಷ ರೂ. ಮತ್ತು ಜಿಲ್ಲಾ ಪರಿಷತ್ತಿನಿಂದ 11.77 ಲಕ್ಷರೂ ಬಿಡುಗಡೆ ಮಾಡಲಾಗಿದೆ.

**ಗದಗದಲ್ಲಿ ಧಾರವಾಡದಲ್ಲಿರುವ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯ ನಡೆಸುವ ಬಗ್ಗೆ**

165-ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಗದಗದಲ್ಲಿ ಧಾರವಾಡದಲ್ಲಿರುವ ಜಿಲ್ಲಾ ನ್ಯಾಯಾಲಯ ನಡೆಸುವಂತೆ ಗದಗ ವಕೀಲರ ಸಂಘದಿಂದ ಮನವಿ ಸರ್ಕಾರಕ್ಕೆ ಬಂದಿದೆಯೇ?*

*ಅ) ಬಂದಿದ್ದರೆ, ಸರ್ಕಾರ ಈ ಬೇಡಿಕೆ ಈಡೇರಿಸಲು ಯಾವ ಕ್ರಮ ಕೈಗೊಂಡಿದೆ?*

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):

ಅ) ಹೌದು.

ಆ) ಮಾನ್ಯ ಉಚ್ಚನ್ಯಾಯಾಲಯದ ಪರಿಶೀಲನೆಯಲ್ಲಿದೆ.

**ಸೋಮವಾರ ಪೇಟೆ ತಾಲ್ಲೂಕಿನ ಹಾರಂಗಿ ನಾಲೆಯ ಏತ ನೀರಾವರಿ ಯೋಜನೆ**

17 - ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ) : ಮಾನ್ಯ ಉಪಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

*ಅ) ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಹಾರಂಗಿ ನಾಲೆಯಿಂದ ಒಂದು ಏತ ನೀರಾವರಿ ಯೋಜನೆ ಪ್ರಾರಂಭಿಸಿ 12 ವರ್ಷ ಆಗಿರುವುದು ನಿಜವೇ?*

*ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಈವರೆವಿಗೆ ಪೂರ್ಣಗೊಳಿಸದಿರಲು ಕಾರಣವೇನು? ಹಾಗೂ ಎಂದು ಪೂರ್ಣಗೊಳಿಸಲಾಗುವುದು?*

ಶ್ರೀ ಎಸ್.ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು):

ಅ) ಹಾರಂಗಿ ಯೋಜನೆಯ ಒದು ಅಂಗವಾಗಿರುವ ಸೋಮವಾರಪೇಟೆ ಏತ ನೀರಾವರಿ ಯೋಜನೆಗೆ ಅಕ್ಟೋಬರ್ 1984 ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಈ ಯೋಜನೆಯ ಕಾಮಗಾರಿಯನ್ನು 1986-87ನೇ ಸಾಲಿನಲ್ಲಿ ಪ್ರಾರಂಭಿಸಲಾಗಿದೆ.

ಆ) ಈ ಯೋಜನೆಗೆ ಅವಶ್ಯವಾಗಿರುವ ವಿದ್ಯುತ್ ಸರಬರಾಜಿನ ಕಾಮಗಾರಿಗಳು ಕರ್ನಾಟಕ ವಿದ್ಯುತ್ ಮಂಡಳಿ ವತಿಯಿಂದ ಪ್ರಾರಂಭವಾಗಿಲ್ಲದಿರುವುದೂ ಮತ್ತು ಹೆಡ್‌ವರ್ಕ್ಸ್ ಕಾಮಗಾರಿಯ ಬಗ್ಗೆ ಗುತ್ತಿಗೆಯನ್ನು ನೀಡಿರುವವರ ವಿರುದ್ಧ ಉಚ್ಚ ನ್ಯಾಯಾಲಯದಲ್ಲಿ ಹೂಡಲಾಗಿದ್ದ ದಾವೆಯನ್ನು ತೆರವು ಮಾಡುವುದರಲ್ಲಿ ಆದ ವಿಳಂಬ ಇವುಗಳೇ ಈ ಯೋಜನೆಯನ್ನು ಪೂರ್ಣಗೊಳಿಸಲು ವಿಳಂಬ ಆಗಿರುವುದಕ್ಕೆ ಮುಖ್ಯ ಕಾರಣ. ಸದರಿ ಯೋಜನೆಯ ಕಾಮಗಾರಿಯನ್ನು ಮುಂದುವರೆಸಲಾಗುತ್ತಿದ್ದು, ಇದನ್ನು 1995-96ನೇ ಸಾಲಿನಲ್ಲಿ ಪೂರ್ಣಗೊಳಿಸುವ ಸಾಧ್ಯತೆಯಿದೆ.

**ಪಾಂಡವಪುರ ಕ್ಷೇತ್ರದ ಲೋಕೋಪಯೋಗಿ ಇಲಾಖೆ ಸೇರಿದ ರಸ್ತೆ ದುರಸ್ತಿ**

95 - ಶ್ರೀ ಡಿ. ಹಲಗೇಗೌಡ (ಪಾಂಡವಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

*ಅ) ಪಾಂಡವಪುರ ಕ್ಷೇತ್ರದ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳಿಗೆ 1992-93 ಮತ್ತು 1993-94ನೇ ವರ್ಷಗಳಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ?*

*ಆ) ಈ ಕ್ಷೇತ್ರದಲ್ಲಿ ಬಹುಪಾಲು ರಸ್ತೆಗಳು ಶಿಥಿಲವಾಗಿ ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

*ಇ) ಮಂಡ್ಯ ಜಿಲ್ಲೆಯ ಬೇರೆ ಕ್ಷೇತ್ರಗಳಿಗೆ ಹೋಲಿಸಿದರೆ ಈ ಕ್ಷೇತ್ರದಲ್ಲಿ ಇಲಾಖೆಯ ರಸ್ತೆ ಕಾಮಗಾರಿಗಳು ಬಹಳ ಕಡಿಮೆ ಪ್ರಮಾಣದಲ್ಲಿ ನಡೆದಿರುವುದು ನಿಜವೇ?*